ಅ) 268

ಆ) **ಉದ್ಯಾನ ವನಗಳ ವಿವರ : ಸಂಖ್ಯೆ**

ಅ) ಬೆಂಗಳೂರು ಮಹಾನಗರ ಪಾಲಿಕೆ 200

ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ 48

ಇ) ಸರ್ಕಾರದ ತೋಟಗಾರಿಕೆ 20

ಇ) ಇಲ್ಲ.

ಬಾಲವಾಡಿ ಶಿಕ್ಷಕರುಗಳ ಸೇವೆಗಳನ್ನು ಖಾಯಂಗೊಳಿಸುವಿಕೆ

257 - ಶ್ರೀ ಸಾದತ್ ಅಲಿಖಾನ್ (ಚನ್ನಪಟ್ಟಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚನ್ನಪಟ್ಟಣ ತಾಲ್ಲೂಕಿನಲ್ಲಿ ಕೆಲಸ ಮಾಡುತ್ತಿರುವ ಬಾಲವಾಡಿ ಶಿಕ್ಷಕಿಯರ ಸೇವೆಯನ್ನು ಸಕ್ರಮಗೊಳಿಸುವ ಪ್ರಸ್ತಾವನೆ ಸರ್ಕಾರದಲ್ಲಿ 9 ವರ್ಷಗಳಿಂದ ಬಾಕಿ ಇದೆಯೇ?

ಆ) ಇತರ ಜಿಲ್ಲೆಗಳಲ್ಲಿ ಬಾಲವಾಡಿ ಶಿಕ್ಷಕಿಯರ ಸೇವೆಯನ್ನು ಸಕ್ರಮಗೊಳಿಸಿ ಸರ್ಕಾರಿ ಆದೇಶ ಹೊರಡಿಸಲಾಗಿದೆಯೇ?

ಇ) ಚನ್ನಪಟ್ಟಣ ತಾಲ್ಲೂಕಿಗೆ ಸರ್ಕಾರಿ ಆದೇಶ ಅನ್ವಯವಾಗದೇ ಇರುವ ಕಾರಣಗಳು?

ಈ) ಅವರ ಸೇವೆಗಳನ್ನು ಯಾವಾಗ ಸಕ್ರಮಗೊಳಿಸಲಾಗುವುದು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಇಲ್ಲ.

ಆ) ಇಲ್ಲ. ಆದರೆ ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಬಾಲವಾಡಿ ಶಿಕ್ಷಕಿಯರ ಸೇವೆಯನ್ನು ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 2 ಎಸ್‌ಎಲ್‌ಸಿ 90 ದಿನಾಂಕ 6.8.90ರನ್ವಯ ಸಕ್ರಮಗೊಳಿಸುವ ಬಗ್ಗೆ ಸ್ಪಷ್ಟೀಕರಣ ನೀಡಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯೊಂದಿಗೆ ಸಮಾಲೋಚಿಸಿ, ಅಂಗನವಾಡಿಯರ ಸೇವೆಗಳನ್ನು ನಿರ್ವಹಿಸುವಂತೆ ಬಾಲವಾಡಿ ಶಿಕ್ಷಕರಸೇವೆಗಳನ್ನು ಆ ಇಲಾಖೆಗೆ ನೀಡುವಂತೆ ಕ್ರಮ ಜರುಗಿಸಲಾಗುವುದು.

ಕೊಳವೆ ಬಾವಿಗಳ ದುರಸ್ತಿ

306 - ಶ್ರೀ ಸಿ. ವೀರಭದ್ರಯ್ಯ (ಕೊರಟಗೆರೆ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಜಿಲ್ಲೆ ನೆಲಮಂಗಲ ತಾಲ್ಲೂಕು ಜಿಲ್ಲಾ ಪರಿಷತ್ ಇಂಜಿನಿಯರಿಂಗ್ ವಿಭಾಗಕ್ಕೆ 1990 ರಿಂದ 1994 ಜನವರಿಯವರೆಗೆ ಅಭಿವೃದ್ಧಿ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ಸರ್ಕಾರದಿಂದ ಬಿಡುಗಡೆಯಾಗಿದೆ. (ವರ್ಷವಾರು ಮಾಹಿತಿಯನ್ನು ನೀಡುವುದು)

ಆ) ಈ ಪೈಕಿ ಪ್ರತಿ ವರ್ಷ 3 ಹೋಬಳಿಗಳಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ. (ವರ್ಷವಾರು ಮಾಹಿತಿಯನ್ನು ನೀಡುವುದು)